RNU AIR DHARWAD

# SEPTEMBER 15, 2025

## AKASHAVANI - DHARWAD

## PRADESH SAMACHARA (KANNADA) 12 PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ' ಧ್ಯೇಯದೊಂದಿಗೆ ಜರುಗಿದ, ಲೋಕ ಅದಾಲತ್‌ನಲ್ಲಿ, ಧಾರವಾಡ ಉಚ್ಚ ನ್ಯಾಯಾಲಯದ 4 ಪೀಠಗಳಲ್ಲಿ, ಒಟ್ಟು ಸಾವಿರದ 189 ಪ್ರಕರಣಗಳನ್ನು ವಿಚಾರಣೆಗೆ ಕೈಗೆತ್ತಿಕೊಂಡು, 203 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ. 3 ಕೋಟಿ 43 ಲಕ್ಷ 18 ಸಾವಿರದ 820 ರೂಪಾಯಿ ಪರಿಹಾರ, ಕಕ್ಷಿದಾರರಿಗೆ ನೀಡಲಾಗಿದೆ. ರಾಜೀ ಸಂಧಾನಕ್ಕೆ ಯೋಗ್ಯವಾದ ಪ್ರಕರಣಗಳ ವಿಚಾರಣೆಯನ್ನು, ನ್ಯಾಯಮೂರ್ತಿ ಎಸ್.ಸುನಿಲ್ ದತ್ ಯಾದವ, ಎಸ್.ಆರ್.ಕೃಷ್ಣ ಕುಮಾರ, ಸಿ.ಎಂ.ಪೂಣಚ್ಚ ಹಾಗೂ ವಿಜಯಕುಮಾರ ಪಾಟೀಲ, ನಡೆಸಿದರು.

<><><>

ಜಗತ್ತಿನ ಸರ್ವಶ್ರೇಷ್ಠ ಅಭಿಯಂತರ, ಭಾರತ ರತ್ನ ಸರ್. ಎಂ. ವಿಶ್ವೇಶ್ವರಾಯ ಅವರ ಜನ್ಮದಿನವಾದ ಇಂದು, ನಾಡಿನಾದ್ಯಂತ ರಾಷ್ಟ್ರೀಯ ಅಭಿಯಂತರರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ರಾಜ್ಯ ಸೇರಿದಂತೆ, ರಾಷ್ಟ್ರದ ಅಭಿವೃದ್ಧಿಗೆ ವಿಶೇಷ ಕೊಡುಗೆಗಳನ್ನು ನೀಡಿದ ಸರ್. ಎಂ ವಿಶ್ವೇಶ್ವರಾಯ ಅವರ ಜನ್ಮದಿನದಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ನಮನಗಳನ್ನು ಸಲ್ಲಿಸಿದ್ದು, ಅಭಿಯಂತರರ ದಿನದ ಶುಭಾಶಯಗಳನ್ನು ಕೋರಿದ್ದಾರೆ. ಬೆಂಗಳೂರು ಕೆ.ಆರ್ ವೃತ್ತದಲ್ಲಿರುವ ಸರ್. ಎಂ ವಿಶ್ವೇಶ್ವರಾಯ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಗೌರವ ನಮನ ಸಲ್ಲಿಸಿದರು.

<><><>

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನೆಲೆ, ಇಂದು ಕೊಪ್ಪಳ ಜಿಲ್ಲಾ ಕ್ರೀಡಾಂಗಣದಿಂದ, ಜಿಲ್ಲಾಡಳಿತ ಭವನದ ವರೆಗೆ ಆಯೋಜಿತ ಸೈಕಲ್ ಜಾಥಾ ಗೆ ಜಿಲ್ಲಾಧಿಕಾರಿ ಡಾಕ್ಟರ ಸುರೇಶ್ ಬಿ. ಇಟ್ನಾಳ್ ಚಾಲನೆ ನೀಡಿ ಮಾತನಾಡಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ 'ಮತದಾನ', ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ, ಮತದಾನದ ಮಹತ್ವ ಸಾರುವ ಉದ್ದೇಶದಿಂದ, ಮತ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

<><><>

ಧ್ವನಿ: ಡಾಕ್ಟರ ಸುರೇಶ್ ಬಿ ಹಿಟ್ನಾಳ್ 35 ಸೆಕೆಂದುಗಳು

<><><>

ಧಾರವಾಡ ಕರ್ನಾಟಕ ಕಾಲೇಜು ಮೈದಾನದಲ್ಲಿ ಆಯೋಜಿತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್ ಪಾಲ್ಗೊಂಡರು.

<><><>

ಬೆಂಗಳೂರು ನಗರ ಜಿಲ್ಲಾಡಳಿತದ ವತಿಯಿಂದ ಆಯೋಜಿತ ಮತದಾರ ಜಾಗೃತಿ ಸೈಕಲ್ ಜಾಥಾಗೆ, ಜಯನಗರದ ಅಶೋಕ ವೃತ್ತದಲ್ಲಿ ಜಿಲ್ಲಾಧಿಕಾರಿ ಜಿ. ಜಗದೀಶ ಚಾಲನೆ ನೀಡಿದರು.

<><><>

ಮೈಸೂರು ಜಿಲ್ಲಾಡಳಿತ ವತಿಯಿಂದ ಆಯೋಜಿತ  ಮತದಾರ ಜಾಗೃತಿ ಸೈಕಲ್ ಜಾಥಾಗೆ ವಿಧಾನ ಪರಿಷತ್ ಶಾಸಕ ಮಂಜೇಗೌಡ ಹಾಗೂ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ಜಂಟಿಯಾಗಿ ಚಾಲನೆ ನೀಡಿದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಈ ಮಧ್ಯಾಹ್ನ 2:55 ಕ್ಕೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಆಯೋಜಿತ ಕೃಷಿ ಮೇಳ–2025 ಅನ್ನು ಉದ್ಘಾಟಿಸಲಿದ್ದಾರೆ.  ಕೃಷಿ ಮೇಳದಲ್ಲಿ ಆಯೋಜಿತ 'ಸುಸ್ಥಿರತೆಗಾಗಿ ಮಣ್ಣಿನ ಸಂರಕ್ಷಣೆ ಹಾಗೂ ಪರಿಸರಸ್ನೇಹಿ ನೈಸರ್ಗಿಕ ಕೃಷಿ' ವಿಚಾರಗೋಷ್ಠಿಯಲ್ಲಿ ಪಾಲ್ಗೊಂಡ,  ಕುಂದಗೋಳ ತಾಲೂಕು, ಹಿರೇಗುಂಜಾಳ ಗ್ರಾಮದ ಪ್ರಗತಿಪರ ರೈತ ಮಲ್ಲೇಶಪ್ಪ ಬಿಸಿರೊಟ್ಟಿ ಮಾತನಾಡಿ– ಜೀವಾಮೃತ, ದಶಪರ್ಣಿ, ಬೇವಿನ ಹಿಂಡಿ ಸಹಿತ ಜೈವಿಕ ಗೊಬ್ಬರಗಳು ಹಾಗೂ ಅಂತರ ಬೆಳೆಗಳಿಂದ ಮಣ್ಣಿನ ಫಲವತ್ತತೆ ಹೆಚ್ಚಿಸಲು ಸಾಧ್ಯವಿದೆ ಎಂದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ಸಂಜೆ ಕಲಬುರಗಿಗೆ ಭೇಟಿ ನೀಡಲಿದ್ದು, ನಾಡಿದ್ದು 17 ರಂದು, ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಬೆಳಗ್ಗೆ 9 ಗಂಟೆಗೆ, ಪೊಲೀಸ್ ಕವಾಯತು ಮೈದಾನದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಸಾರ್ವಜನಿಕ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ, ಅಜಯ ಸಿಂಗ್, ಕಲಬುರಗಿಯಲ್ಲಿ ತಿಳಿಸಿದ್ದಾರೆ.

<><><>

ಹಳೆಗನ್ನಡ ಸಾಹಿತ್ಯ, ಗ್ರಂಥ ಸಂಪಾದನೆ, ಹಸ್ತಪ್ರತಿ ಶಾಸ್ತ್ರ  ಸೇರಿದಂತೆ  ಕನ್ನಡ ಸಾಹಿತ್ಯದ, ನೈತಿಕ ನೆಲೆಯ ಗುಣಮಟ್ಟದ ಸಂಶೋಧನೆಯಲ್ಲಿ, ಡಾಕ್ಟರ ಜೆ.ಎಂ. ನಾಗಯ್ಯ ಅವರು ಸಮಚಿತ್ತದ ಸಂಶೋಧಕರಾಗಿದ್ದಾರೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಉಪ ಕುಲಪತಿ ಡಾಕ್ಟರ ಡಿ.ವಿ. ಪರಮಶಿವಮೂರ್ತಿ ಹೇಳಿದರು. ಧಾರವಾಡ, ಕರ್ನಾಟಕ ವಿದ್ಯಾ ವರ್ಧಕ ಸಂಘದ, ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ, ಜರುಗಿದ, ಕನ್ನಡ ಭಾಷೆಯ ಹಿರಿಯ ವಿದ್ವಾಂಸ, ಜೆ.ಎಂ. ನಾಗಯ್ಯ ಅವರ, ಸಾಹಿತ್ಯಾವಲೋಕನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

ರಾಜ್ಯ ಸರ್ಕಾರವು ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ಸಾವಿರದ 900 ಕೋಟಿ ರೂಪಾಯಿ ಕಾಮಗಾರಿಗಳನ್ನು ಈವರೆಗೆ ಮಂಜೂರು ಮಾಡಿದೆ. ಮೇಕೆದಾಟು ಯೋಜನೆಯನ್ನು ಜಾರಿಗೆ ತರುವ ಮೂಲಕ, ತಮಿಳುನಾಡು ರಾಜ್ಯಕ್ಕೆ ಹರಿಯುವ ಹೆಚ್ಚುವರಿ ನೀರಿನ ಸದುಪಯೋಗದ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹೇಳಿದರು.

ಮಂಡ್ಯ ಜಿಲ್ಲೆಯಲ್ಲಿ ಆಯೋಜಿತ ಗಗನಚುಕ್ಕಿ ಜಲಪಾತೋತ್ಸವದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>